4

# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 887
ಸದಸ್ಯರ ಹೆಸರು : ಶ್ರೀ ನಿರಾಣಿ ಹನಮಂತ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 18.12.2018
ಉತ್ತರಿಸುವ ಸಚಿವರು : ಜಲ ಸಂಪನ್ಮೂಲ ಸಚಿವರು

| ಅ.ನಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬಾಗಲಕೋಟೆ ತಾಲ್ಲೂಕಿನ ಕಲಾದಗಿ ಗ್ರಾಮಗಳಲ್ಲಿರುವ ಸಂತ್ರಸ್ಥ ಕುಟುಂಬಗಳ ಸಂಖ್ಯೆ ಎಷ್ಟು; | • ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾಗುವ ಬಾಗಲಕೋಟೆ ತಾಲ್ಲೂಕಿನ ಕಲಾದಗಿ ಗ್ರಾಮದ ಸಂತ್ರಸ್ಥರ ಕುಟುಂಬಗಳ ಸಂಖ್ಯೆಯು 5,844 ಇರುತ್ತದೆ. |
| ಆ) | ಸದರಿ ಕಲಾದಗಿ ಗ್ರಾಮಕ್ಕೆ ಸಂಪೂರ್ಣವಾಗಿ ಪುನರ್ವಸತಿ ಸೌಲಭ್ಯ ಒದಗಿಸಲಾಗಿದೆಯೇ; | • ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾಗುವ ಬಾಗಲಕೋಟೆ ತಾಲ್ಲೂಕಿನ ಕಲಾದಗಿ ಗ್ರಾಮದ ಸಂತ್ರಸ್ಥರುಗಳಿಗಾಗಿ ಕಲಾದಗಿ ಗ್ರಾಮದ ಜಮೀನಿನಲ್ಲಿ ಪುನರ್ವಸತಿ ಕೇಂದ್ರವನ್ನು ನಿರ್ಮಿಸಲಾಗಿದೆ. ಪುನರ್ವಸತಿ ಕೇಂದ್ರದಲ್ಲಿ ಲೇಔಟ್ ನಿರ್ಮಾಣ ಮಾಡಿ ಮೂಲಭೂತ ಸೌಕರ್ಯಗಳಾದ ರಸ್ತೆ, ವಿದ್ಯುದ್ಧೀಕರಣ, ಶಿಕ್ಷಕರ ವಸತಿ ಗೃಹ (03 ಸಂಖ್ಯೆ) ಅಂಗನವಾಡಿ (03 ಸಂಖ್ಯೆ) ಹಾಗೂ ಗ್ರಾಮೀಣ ಪಶು ಚಿಕಿತ್ಸಾಲಯ ಮುಂತಾದ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. ತಾತ್ಕಾಲಿಕವಾಗಿ ಪುನರ್ವಸತಿ ಕೇಂದ್ರದಲ್ಲಿ ನೀರಿನ ಸೌಲಭ್ಯವನ್ನು ಸಹ ಒದಗಿಸಲಾಗಿದೆ.<br>• ಸಂತ್ರಸ್ಥರು ಪುನರ್‌ವಸತಿ ಕೇಂದ್ರಕ್ಕೆ ಸಂಪೂರ್ಣವಾಗಿ ಸ್ಥಳಾಂತರಗೊಂಡ ನಂತರ ಇನ್ನುಳಿದ ಪುನರ್‌ವಸತಿ ಸೌಲಭ್ಯಗಳನ್ನು ನಿಯಮಾನುಸಾರ ಒದಗಿಸಲಾಗುವುದು.<br>• ಬಾಧಿತವಾಗುವ ಕುಟುಂಬಗಳ ಅವಶ್ಯಕತೆಗನುಗುಣವಾಗಿ ಜಮೀನು ಸ್ವಾಧೀನಪಡಿಸಿಕೊಂಡು ಪುನರ್‌ವಸತಿ ಕೇಂದ್ರವನ್ನು ಅಭಿವೃದ್ಧಿಪಡಿಸಲಾಗಿದೆ. |
| ಇ) | ಈ ಗ್ರಾಮದಲ್ಲಿರುವ ಸಂತ್ರಸ್ಥ ಕುಟುಂಬಗಳಿಗೆ (PDF-Project Displaced Family) ಬೇಕಾಗುವಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ; | • ಕಲಾದಗಿ ಗ್ರಾಮದ ಸಂತ್ರಸ್ಥ ಕುಟುಂಬಗಳಿಗೆ ಬೇಕಾಗುವಷ್ಟು ಕ್ಷೇತ್ರ 300 ಎಕರೆ 09 ಗುಂಟೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. |
| ಈ) | ಇಲ್ಲವಾದಲ್ಲಿ ಇನ್ನೂ ಎಷ್ಟು ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಬೇಕು; | • ಅನ್ವಯಿಸುವುದಿಲ್ಲ. |
| ಉ) | ಯಾವ ಕಾಲಮಿತಿಯಲ್ಲಿ ಉಳಿದ ಜಮೀನನ್ನು ಭೂಸ್ವಾಧೀನಪಡಿಸಿಕೊಂಡು ಸಂಪೂರ್ಣ ಪುನರ್ವಸತಿ ಸೌಲಭ್ಯ ಕಲ್ಪಿಸಲಾಗುವುದು? | • ಅನ್ವಯಿಸುವುದಿಲ್ಲ. |

ಸಂಖ್ಯೆ: ಜಸಂಇ 74 ಡಬ್ಲ್ಯೂಬಿಎಂ 2018

(ಡಿ.ಕೆ.ಶಿವಕುಮಾರ್)
ಜಲ ಸಂಪನ್ಮೂಲ ಸಚಿವರು